**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಡಿ.ಎಸ್. ಅರುಣ್ ಇವರು ನಿಯಮ 72 ರಡಿಯಲ್ಲಿ ಮಂಡಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ.**

**ವಿಷಯ : ಕರ್ನಾಟಕ ರಾಜ್ಯದ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಕನಿಷ್ಠ ವೇತನ ಜಾರಿ ಮಾಡುವ ಕುರಿತು ಮತ್ತು ಖಾಯಂಯಾಗಿ ಹಾಗೂ ಈ ಹಿಂದೆ ಇದ್ದ ಕೆಲಸದ ಅವಧಿಯನ್ನು ಮಾಡುವ ಕುರಿತು.**

*****

**ಉತ್ತರ :** ಗ್ರಾಮ ಪಂಚಾಯಿತಿ ಗ್ರಂಥಾಲಯದ ನಿರ್ವಹಣೆಯನ್ನು ಈ ಮೊದಲು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಸಚಿವಾಲಯದ ಆಡಳಿತ ವ್ಯಾಪ್ತಿಯ ಸಾರ್ವಜನಿಕ ಗ್ರಂಥಾಲಯ ಇಲಾಖೆಯು ನಿರ್ವಹಣೆ ಮಾಡುತ್ತಿತ್ತು. ಆ ಸಮಯದಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯಗಳು ಬೆಳಿಗ್ಗೆ 9.00 ರಿಂದ 11.00 ಗಂಟೆಯವರೆಗೆ ಹಾಗೂ ಸಂಜೆ 4.00 ರಿಂದ 6.00 ಗಂಟೆಯವರೆಗೆ ಒಟ್ಟು 4.00 ಗಂಟೆಗಳು ಕಾರ್ಯನಿರ್ವಹಿಸುತ್ತಿದ್ದವು.

ಸರ್ಕಾರದ ಆದೇಶ ಸಂಖ್ಯೆ ಇಡಿ 64 ಎಲ್‌ಐಬಿ 2015, ದಿನಾಂಕ:26.02.2019 ರ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಆದೇಶದಲ್ಲಿ ಗ್ರಾಮ ಪಂಚಾಯಿತಿ ಗ್ರಂಥಾಲಯದ ನಿರ್ವಹಣೆಯನ್ನು ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ದಿನಾಂಕ:01.03.2019 ರಿಂದ ಜಾರಿಗೆ ಬರುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವರ್ಗಾವಣೆಯಾದ ನಂತರ ಸರ್ಕಾರದ ಆದೇಶ ಸಂಖ್ಯೆ: ಆರ್.ಡಿ.ಪಿ.ಆರ್. 62 ಜಿ.ಪಿ.ಎಸ್ 2020, ದಿನಾಂಕ:27-05-2021 ರನ್ವಯ ಗ್ರಾಮ ಪಂಚಾಯತಿ ಗ್ರಂಥಾಲಯದ ಹೆಸರನ್ನು "ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ" ಎಂದು ಮರು ಪದನಾಮೀಕರಿಸಿದೆ.

ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಕೆಲಸದ ವೇಳೆಯನ್ನು ದಿನಾಂಕ: 01-06-2021 ರಿಂದ ಜಾರಿಗೆ ಬರುವಂತೆ ಪ್ರಸ್ತುತ ಇರುವ 4.00 ಗಂಟೆಯಿಂದ 6.00 ಗಂಟೆಯವರೆಗೆ ಅಂದರೆ, ಮಂಗಳವಾರ, ಬುಧವಾರ, ಗುರುವಾರ, ಶುಕ್ರವಾರ ಮತ್ತು ಭಾನುವಾರಗಳಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆವರೆಗೆ ಹಾಗೂ ಮಧ್ಯಾಹ್ನ 3.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಹಾಗೂ ಶನಿವಾರದಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ ಮತ್ತು ಮಧ್ಯಾಹ್ನ 2.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ನಿಗಧಿಪಡಿಸಿ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರ ಗೌರವ ಧನವನ್ನು ರೂ.7000/- ದಿಂದ 12000/- ರೂ ಗಳಿಗೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 156 ಜಿಪಿಎ 2022 (ಇ), ದಿನಾಂಕ: 14-11-2022 ರಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಮೇಲ್ವಿಚಾರಕರಿಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಸೇವಾ) ನಿಯಮಗಳು, 2022 ಅನ್ನು ರೂಪಿಸಲಾಗಿದ್ದು, ನೇಮಕಾತಿ ವಿಧಾನ, ರಜೆ ಸೌಲಭ್ಯ, ಅನುಕಂಪದ ಆಧಾರಿತ ನೇಮಕಾತಿ, ಶಿಸ್ತು ಪ್ರಾಧಿಕಾರ ಮತ್ತು ಇತರೆ ಸೇವಾ ಷರತ್ತುಗಳನ್ನು ನಿರ್ದಿಷ್ಟಪಡಿಸಲಾಗಿದೆ.

149-B
872-87

ಅದರಂತೆ, ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಮೇಲ್ವಿಚಾರಕರಿಗೆ ವಾರ್ಷಿಕವಾಗಿ 10 ದಿನಗಳ ಸಾಂದರ್ಭಿಕ ರಜೆ, 2 ದಿನಗಳ ನಿರ್ಬಂಧಿತ ರಜೆ, ಮಹಿಳಾ ನೌಕರರಿಗೆ, 180 ದಿನಗಳ ಪ್ರಸೂತಿ ರಜೆ, ಪುರುಷ ನೌಕರರಿಗೆ 15 ದಿನಗಳ ಪಿತೃತ್ವ ರಜೆ ಮಂಜೂರು ಮಾಡಲು, ಸೇವಾ ಅವಧಿಯಲ್ಲಿ ಒಂದು ಬಾರಿ ಮಾತ್ರ ವರ್ಗಾವಣೆ ಮಾಡಲು, ಬಾಹ್ಯವಾಗಿ ಉನ್ನತ ವ್ಯಾಸಂಗ ಮಾಡಲು ಮತ್ತು ಸೇವೆಯಲ್ಲಿರುವಾಗಲೇ ಮರಣ ಹೊಂದಿದಲ್ಲಿ ಅವರ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಕಲ್ಪಿಸಲಾಗಿದೆ.

ರಾಜ್ಯದಲ್ಲಿ ಪ್ರಸ್ತುತ 5,954 ಗ್ರಾಮ ಪಂಚಾಯತಿಗಳಿದ್ದು, 5,575 ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರದ ಆದೇಶ ಸಂಖ್ಯೆ ಕೆಪಿಆರ್‌ಸಿ-ಡಿಇವಿ/544/2021, ದಿನಾಂಕ 19.12.2022 ರಲ್ಲಿ ರಾಜ್ಯದ 330 ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಿ ಆದೇಶಿಸಲಾಗಿದೆ.

ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರನ್ನು ಗೌರವ ಧನದ ಆಧಾರದ ಮೇಲೆ ನೇಮಕಾತಿ ಮಾಡಿಕೊಂಡಿರುವುದರಿಂದ ಖಾಯಂ ಮಾಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಗ್ರಾಮ ಪಂಚಾಯತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರ ಕೆಲಸದ ವೇಳೆಯನ್ನು ಪ್ರಸ್ತುತ ಇರುವ 6.00 ಗಂಟೆಯಿಂದ 8.00 ಗಂಟೆಯವರೆಗೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಸಂಖ್ಯೆ:ಗ್ರಾಅಪ 127 ಗ್ರಾಪಂಅ 2023.

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ